# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ

**6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003**

ಕಡತ ಸಂಖ್ಯೆ: ಬಿ1/E.C.CCTV/34/2021-22 ದಿನಾಂಕ:14.03.2022

## "ಸುತ್ತೋಲೆ"

ವಿಷಯ:- 2022ರ ಎಸ್.ಎಸ್.ಎಲ್.ಸಿ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಕಡ್ಡಾಯವಾಗಿ ಅಳವಡಿಸುವ ಕುರಿತು.

ಉಲ್ಲೇಖ:- ಮಂಡಳಿಯ ಸುತ್ತೋಲೆ ಪತ್ರ ಸಂಖ್ಯೆ:ಬಿ1(ಬಿ6)/CCTV.IMP/04/17-18 ದಿನಾಂಕ:20-01-2018 ಮತ್ತು ದಿನಾಂಕ:01-06-2020

************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2022ರ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಯನ್ನು ದಿನಾಂಕ:28.03.2022 ರಿಂದ ದಿನಾಂಕ:11.04.2022ವರೆಗೆ ನಡೆಸಲು ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ.

ಉಲ್ಲೇಖ(1)ರ ಸುತ್ತೋಲೆಗಳಲ್ಲಿ 2018 ಮತ್ತು 2020ರ ಎಸ್.ಎಸ್.ಎಲ್.ಸಿ ಪರೀಕ್ಷೆ ಸಂದರ್ಭದಲ್ಲಿ ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಪ್ರೌಢ ಶಾಲೆಗಳ ಪರೀಕ್ಷಾ ಕೇಂದ್ರಗಳಲ್ಲಿ ರೂ.40,000/- ವೆಚ್ಚದಲ್ಲಿ ಶಾಲಾ ಸಂಚಿತ ನಿಧಿಯಲ್ಲಿ ಲಭ್ಯವಿರುವ ಅನುದಾನದಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸಿಕೊಳ್ಳಲು ಸೂಚಿಸಿಲಾಗಿರುತ್ತದೆ. ಸದರಿ ಪತ್ರದ ಸೂಚನೆಗಳನ್ವಯ ಇದುವರೆವಿಗೂ ಸಿಸಿಟಿವಿ ಕ್ಯಾಮೆರಾ ಅಳವಡಿಸದೇ ಇದ್ದಲ್ಲಿ ಅಥವಾ ಈ ಸಾಲಿನಲ್ಲಿ ಹೊಸದಾಗಿ ಪರೀಕ್ಷಾ ಕೇಂದ್ರವಾಗಿ ಗುರುತಿಸಿದ್ದು, ಸದರಿ ಕೇಂದ್ರದಲ್ಲಿ ಸಿಸಿಟಿವಿ ಅಳವಡಿಸದೇ ಇದ್ದಲ್ಲಿ, ರೂ.40,000/-ಗಳ ವೆಚ್ಚದ ಮಿತಿಯೊಳಗೆ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರುಗಳ ಕೊಠಡಿ ಹಾಗೂ ಕಾರಿಡಾರ್ ಸೇರಿ ಒಟ್ಟು 4 ಪಾಯಿಂಟ್ ಒಳಗೊಂಡಂತೆ ಸಿಸಿಟಿವಿ(1 DVR,4 HD CAMERA, 1 MONITOR, CABLEING AND INSTALATION)ಯನ್ನು ಶಾಲೆಯಲ್ಲಿ ಲಭ್ಯವಿರುವ ಶಾಲಾ ಸಂಚಿತ ನಿಧಿಯಿಂದ ಭರಿಸಿಕೊಂಡು ಕಡ್ಡಾಯವಾಗಿ ಅಳವಡಿಸುವುದು.

ಒಂದು ವೇಳೆ ಪರೀಕ್ಷಾ ಕೇಂದ್ರದ ಶಾಲೆಯ ಸಂಚಿತ ನಿಧಿಯಲ್ಲಿ ಅನುದಾನ ಲಭ್ಯವಿಲ್ಲದಿದ್ದಲ್ಲಿ ಆ ಕೇಂದ್ರಕ್ಕೆ ಟ್ಯಾಗ್ ಆನ್ ಮಾಡಲಾಗಿರುವ ಯಾವುದೇ ಶಾಲೆಯ ಸಂಚಿತ ನಿಧಿಯಿಂದ ಸದರಿ ಖರ್ಚನ್ನು ಭರಿಸುವುದು. ಸಿಸಿಟಿವಿ ಖರೀದಿಯಲ್ಲಿ ಕೆಟಿಪಿಪಿ ಕಾಯ್ದೆ-1999ರನ್ವಯ ಖರೀದಿ ನಿಯಮಗಳನ್ನು ಪಾಲಿಸಲು ಸೂಚಿಸಿದೆ.

ಡಾ. ವಿಶಾಲ್ ಆರ್. ಭಾ.ಆ.ಸೇ
ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಗೂ
ಅಧ್ಯಕ್ಷರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ.

**ರವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ. ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಎಸ್.ಎಸ್.ಎಲ್.ಸಿ ಪರೀಕ್ಷೆಯ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರುಗಳಿಗೆ, ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರ ಮುಖಾಂತರ ಅಗತ್ಯ ಕ್ರಮಕ್ಕಾಗಿ.
4. ಕಛೇರಿ ಪ್ರತಿ.

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003

ಕಡತ ಸಂಖ್ಯೆ: ಬಿ1/E.C.CCTV/34/2021-22 ದಿನಾಂಕ:14.03.2022

**" ಸುತ್ತೋಲೆ "**

ವಿಷಯ:- 2022ರ ಎಸ್.ಎಸ್.ಎಲ್.ಸಿ ಪರೀಕ್ಷಾ ಕೇಂದ್ರಗಳಲ್ಲಿ ಅಳವಡಿಸಲಾಗಿರುವ ಸಿಸಿಟಿವಿ ಕ್ಯಾಮೆರಾಗಳಲ್ಲಿನ ಪರೀಕ್ಷಾ ದಿನಗಳ ವಿಡಿಯೋ ದೃಶ್ಯಾವಳಿಗಳನ್ನು ಜಿಲ್ಲಾ ಹಂತದ ಸಮಿತಿಯಲ್ಲಿ ಪರಿಶೀಲಿಸಿ ವರದಿ ನೀಡುವ ಕುರಿತು.

ಉಲ್ಲೇಖ:- ಮಂಡಳಿಯ ಸುತ್ತೋಲೆ ಪತ್ರ ಸಂಖ್ಯೆ ದಿ:20-01-2018 ಮತ್ತು ದಿ:01-06-2020 ಹಾಗೂ ದಿ:02-07-2020

************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2020ರ ಎಸ್.ಎಸ್.ಎಲ್.ಸಿ ಪರೀಕ್ಷೆಯ ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಪ್ರೌಢ ಶಾಲೆಗಳ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸಿಕೊಳ್ಳಲು ಉಲ್ಲೇಖಿತ ಸುತ್ತೋಲೆ ದಿನಾಂಕ:20-01-2018 ಮತ್ತು ದಿನಾಂಕ:01-06-2020ಗಳಂತೆ ಸೂಚಿಸಲಾಗಿರುತ್ತದೆ.

ಉಲ್ಲೇಖಿತ ಸುತ್ತೋಲೆ ದಿನಾಂಕ:02-07-2020ರಲ್ಲಿ ಪರೀಕ್ಷಾ ಕೇಂದ್ರಗಳಲ್ಲಿ ಅಳವಡಿಸಲಾಗಿರುವ ಸಿಸಿಟಿವಿ ಕ್ಯಾಮೆರಾಗಳ ದೃಶ್ಯಾವಳಿಗಳನ್ನು ಮುಕ್ತಾಯಗೊಂಡ ನಂತರದ ದಿನಾಂಕದಂದೇ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಹಾರ್ಡ್ ಡಿಸ್ಕ್‌ಗಳಲ್ಲಿ ಸಂಗ್ರಹಿಸಿ, ಜಿಲ್ಲಾ ಉಪನಿರ್ದೇಶಕರಿಗೆ ಸಲ್ಲಿಸುವಂತೆ, ಹಾಗೂ ಇದಕ್ಕೆ ತಗಲುವ ವೆಚ್ಚ(Purchase of 1TB Hard Disk and Copying Service Charges) ರೂ.7,000/- ಮಿತಿಯೊಳಗೆ ಪರೀಕ್ಷಾ ಕೇಂದ್ರದ ಶಾಲೆಯಲ್ಲಿ ಲಭ್ಯವಿರುವ ಶಾಲಾ ಸಂಚಿತ ನಿಧಿಯಿಂದ ಭರಿಸಲು ಹಾಗೂ ಸಿಸಿಟಿವಿಗಳ ದೃಶ್ಯಾವಳಿಗಳನ್ನು ಪರಿಶೀಲಿಸಿ ವರದಿ ನೀಡಲು ಜಿಲ್ಲಾ ಹಂತದಲ್ಲಿ ಆಯಾ ಜಿಲ್ಲೆಯ ಡಯಟ್ ಪ್ರಾಂಶುಪಾಲರ ನೇತೃತ್ವದಲ್ಲಿ, ಆಯಾ ಬ್ಲಾಕ್‌ಗೆ ನೋಡಲ್ ಅಧಿಕಾರಿಯಾಗಿ ನೇಮಿಸಿರುವ ಡಯಟ್‌ನ ಒಬ್ಬರು ಹಿರಿಯ ಉಪನ್ಯಾಸಕರು, ಒಬ್ಬರು ಉಪನ್ಯಾಸಕರು ಹಾಗೂ ಆಯಾ ಬ್ಲಾಕ್‌ನ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನೊಳಗೊಂಡಂತೆ ಸಮಿತಿಯನ್ನು ರಚಿಸಲಾಗಿತ್ತು.

ಪ್ರಸ್ತುತ 2022ರ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಗುರುತಿಸಲಾಗಿರುವ ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಪ್ರೌಢ ಶಾಲೆಗಳ ಪರೀಕ್ಷಾ ಕೇಂದ್ರಗಳಲ್ಲಿ ಅಳವಡಿಸಲಾಗಿರುವ ಸಿಸಿಟಿವಿ ಕ್ಯಾಮೆರಾಗಳ ದಿನಾಂಕ:28.03.2022 ರಿಂದ ದಿನಾಂಕ:11.04.2022ರ ವರೆಗಿನ ಎಲ್ಲಾ ದಿನಗಳ ದೃಶ್ಯಾವಳಿಗಳನ್ನು ಪರೀಕ್ಷೆಗಳು ಮುಕ್ತಾಯಗೊಂಡ ನಂತರದ ದಿನಾಂಕದಂದೇ ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಈಗಾಗಲೇ ಉಲ್ಲೇಖಿತ ಸುತ್ತೋಲೆ ದಿನಾಂಕ:02-07-2020ರಂತೆ ಖರೀದಿಸಿರುವ ಹಾರ್ಡ್ ಡಿಸ್ಕ್‌ಗಳಲ್ಲಿ ಸಂಗ್ರಹಿಸಿ, ಜಿಲ್ಲಾ ಉಪನಿರ್ದೇಶಕರಿಗೆ ಸಲ್ಲಿಸುವುದು. ಒಂದು ವೇಳೆ ಈ ಸಾಲಿನಲ್ಲಿ ಹೊಸದಾಗಿ ಪರೀಕ್ಷಾ ಕೇಂದ್ರವಾಗಿ ಗುರುತಿಸಲಾಗಿದ್ದಲ್ಲಿ, ಉಲ್ಲೇಖಿತ ಸುತ್ತೋಲೆ ದಿನಾಂಕ:02-07-2020ರಲ್ಲಿ ತಿಳಿಸಿರುವಂತೆ ಹಾರ್ಡ್ ಡಿಸ್ಕ್ ಖರೀದಿಸಿ, ಮೇಲ್ಕಂಡಂತೆ ಕ್ರಮವಹಿಸುವುದು.

ಮುಂದುವರೆದು ಮೇಲ್ಕಂಡಂತೆ ರಚಿಸಲಾಗಿರುವ ಸಮಿತಿಯು, ಪರೀಕ್ಷಾ ಕೇಂದ್ರಗಳಿಂದ ಸಲ್ಲಿಕೆಯಾಗುವ ಹಾರ್ಡ್ ಡಿಸ್ಕ್‌ನಲ್ಲಿ ದಾಖಲಾಗಿರುವ ದೃಶ್ಯಾವಳಿಗಳನ್ನು ಕೂಲಂಕುಷವಾಗಿ ಪರಿಶೀಲಿಸುವುದು. ಪರೀಕ್ಷಾ ಸಮಯದಲ್ಲಿ ನಡೆದಿರಬಹುದಾದ ನಕಲು/ಸಾಮೂಹಿಕ ನಕಲು, ಯಾವುದೇ ರೀತಿಯ ಅಹಿತಕರ ಘಟನೆಗಳು ಹಾಗೂ ಸಿಸಿಟಿವಿಯನ್ನು ಬಂದ್ ಮಾಡಿರುವ ಬಗ್ಗೆ ಮಾಹಿತಿಗಳನ್ನೊಳಗೊಂಡಂತೆ ವರದಿಯನ್ನು ದಿನಾಂಕ:20-04-2022ರೊಳಗೆ ಉಪನಿರ್ದೇಶಕರು(ಆಡಳಿತ)ರವರಿಗೆ ಸಲ್ಲಿಸಲು ಸಮಿತಿಗೆ ತಿಳಿಸಿದೆ.

ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರು ತಮ್ಮ ವ್ಯಾಪ್ತಿಯ ಎಲ್ಲಾ ಪರೀಕ್ಷಾ ಕೇಂದ್ರಗಳ ಸಿಸಿಟಿವಿ ದೃಶ್ಯಾವಳಿಗಳಿರುವ ಹಾರ್ಡ್ ಡಿಸ್ಕ್‌ಗಳನ್ನು ಪರಿಶೀಲನಾ ಸಮಿತಿಗೆ ನೀಡುವುದು ಮತ್ತು ಪರಿಶೀಲನಾ ವರದಿಯನ್ನು ಪಡೆದು ದಿನಾಂಕ:25-04-2022ರೊಳಗೆ ಮಂಡಳಿಗೆ ಸಲ್ಲಿಸುವುದು.

ಡಾ. ವಿಶಾಲ್ ಆರ್. ಭಾ.ಆ.ಸೇ
ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಗೂ
ಅಧ್ಯಕ್ಷರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ.

**ರವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ. ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಉಪನಿರ್ದೇಶಕರು(ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ. ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಸೂಕ್ತ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಎಸ್.ಎಸ್.ಎಲ್.ಸಿ ಪರೀಕ್ಷೆಯ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರುಗಳಿಗೆ, ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರ ಮುಖಾಂತರ ಅಗತ್ಯ ಕ್ರಮಕ್ಕಾಗಿ.
5. ಕಛೇರಿ ಪ್ರತಿ.